प्रेस प्रकाशनी PRESS RELEASE

भारतीय रिज़र्व बैंक
RESERVE BANK OF INDIA

वेबसाइट : www.rbi.org.in/hindi
Website : www.rbi.org.in
ई-मेल/email : helpdoc@rbi.org.in

संचार विभाग, केंद्रीय कार्यालय, शहीद भगत सिंह मार्ग, फोर्ट, मुंबई - 400 001
**Department of Communication**, Central Office, Shahid Bhagat Singh Marg, Fort, Mumbai - 400 001 फोन/Phone: 022 - 2266 0502

28 ನವೆಂಬರ್ 2024

## ಪತ್ರಿಕಾ ಪ್ರಕಟಣೆ
## ದಿ ರಾಯಚೂರು ಜಿಲ್ಲಾ ಕೇಂದ್ರೀಯ ಸಹಕಾರಿ ಬ್ಯಾಂಕ್, ನಿಯಮಿತ, ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ

ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 20 ಜೊತೆ ಓದಲಾದ ಕಲಂ 56 ರ ನಿಬಂಧನೆಗಳ ಉಲ್ಲಂಘನೆಗಾಗಿ ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ನವೆಂಬರ್ 25, 2024 ರ ಆದೇಶದ ಮೂಲಕ ದಿ ರಾಯಚೂರು ಜಿಲ್ಲಾ ಕೇಂದ್ರೀಯ ಸಹಕಾರಿ ಬ್ಯಾಂಕ್, ನಿಯಮಿತ, ಕರ್ನಾಟಕ - ಈ ಬ್ಯಾಂಕಿಗೆ (ಬ್ಯಾಂಕು) ರೂ. 50,000/- (ರೂ. ಐವತ್ತು ಸಾವಿರ ಮಾತ್ರ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ (1) (ಸಿ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ತನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾರತೀಯ ರಿಸರ್ವ್ ಬ್ಯಾಂಕ್ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31, 2023 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನಬದ್ಧ ನಿರೀಕ್ಷಣೆಯನ್ನು ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ (ನಬಾರ್ಡ್) ನಡೆಸಿತು. ಶಾಸನಬದ್ಧ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮದ ನಿರ್ದೇಶನಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಕೆಳಕಂಡ ಆರೋಪ ಸ್ಥಿರಪಟ್ಟಿದೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿದೆ ಎಂದು ಗೊತ್ತಾಯಿತು:

ಬ್ಯಾಂಕು ತನ್ನ ನಿರ್ದೇಶಕರಿಗೆ ಸಾಲಗಳನ್ನು ಮಂಜೂರು ಮಾಡಿತ್ತು.

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರ

**(ಪುನೀತ್ ಪಾಂಚೋಲಿ)**
ಚೀಫ್ ಜನರಲ್ ಮ್ಯಾನೇಜರ್

**ಪತ್ರಿಕಾ ಪ್ರಕಟಣೆ: 2024-2025/1602**